## ಕರ್ನಾಟಕ ಸರ್ಕಾರ

ಸಂಖ್ಯೆ: ಇಪಿ 73 ಎಸ್‌ಹೆಚ್‌ಹೆಚ್ 2022

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 07-04-2022.

## ಸುತ್ತೋಲೆ

ವಿಷಯ: ದ್ವಿತೀಯ ಪಿ.ಯುಸಿ, ಮುಖ್ಯ ಪರೀಕ್ಷೆಗೆ ವಿದ್ಯಾರ್ಥಿಗಳು ಸಮವಸ್ತ್ರವನ್ನು ಧರಿಸಿ ಪರೀಕ್ಷಾ ಕೇಂದ್ರಕ್ಕೆ ಹಾಜರಾಗುವ ಕುರಿತು.

* * * *

ದ್ವಿತೀಯ ಪಿ.ಯುಸಿ, ಮುಖ್ಯ ಪರೀಕ್ಷೆಯನ್ನು ದಿನಾಂಕ:22-04-2022 ರಿಂದ ದಿನಾಂಕ: 18-05-2022ರವರೆಗೆ ನಡೆಸಲು ಈಗಾಗಲೇ ತೀರ್ಮಾನಿಸಲಾಗಿರುತ್ತದೆ.

ರಾಜ್ಯದ ಎಲ್ಲಾ ಸರ್ಕಾರಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ವಸ್ತ್ರ ಸಂಹಿತೆ ಕುರಿತು ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ: ಇಪಿ 14 ಎಸ್‌ಹೆಚ್‌ಹೆಚ್ 2022, ದಿನಾಂಕ: 05-02-2022 ಹಾಗೂ ಇದೇ ಸಮ ಸಂಖ್ಯೆಯ ತಿದ್ದುಪಡಿ/ಸೇರ್ಪಡೆ ಆದೇಶ ದಿನಾಂಕ: 05-02-2022ರಲ್ಲಿ, ಕರ್ನಾಟಕ ಶಿಕ್ಷಣ ಕಾಯ್ದೆ 1983, ಕಲಂ 133 ಉಪ ಕಂಡಿಕೆ (2) ಹಾಗೂ ಕಲಂ 7(1)(i), 7(2)(g)(v) ಮತ್ತು ಕರ್ನಾಟಕ ಶಿಕ್ಷಣ ಸಂಸ್ಥೆಗಳ (ವರ್ಗೀಕರಣ, ನಿಯಂತ್ರಣ, ಪಠ್ಯಕ್ರಮ ನಿಗದಿಪಡಿಸುವಿಕೆ, ಇತರೆ) ನಿಯಮಗಳು 1995ರ ನಿಯಮ 11ರಲ್ಲಿ ಪ್ರದತ್ತವಾಗಿರುವ ಅಧಿಕಾರದನ್ವಯ ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಸರ್ಕಾರ ನಿಗಧಿಪಡಿಸಿರುವ ಶಾಲಾ ಸಮವಸ್ತ್ರವನ್ನು ವಿದ್ಯಾರ್ಥಿಗಳು ಕಡ್ಡಾಯವಾಗಿ ಧರಿಸತಕ್ಕದ್ದು ಹಾಗೂ ಖಾಸಗಿ ಶಾಲೆಗಳಲ್ಲಿ ಆಯಾ ಆಡಳಿತ ಮಂಡಳಿಗಳು ನಿರ್ಧರಿಸುವ ಸಮವಸ್ತ್ರವನ್ನು ವಿದ್ಯಾರ್ಥಿಗಳು ಧರಿಸತಕ್ಕದ್ದು ಎಂದು ಆದೇಶಿಸಲಾಗಿದೆ.

ಮುಂದುವರೆದು, ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: 2347/2022 c/w WP No:2146/2022 ಮತ್ತು ಇತರೆ ಸಂಬಂಧಿತ ಪ್ರಕರಣಗಳಲ್ಲಿ ದಿನಾಂಕ:15.03.2022 ರಂದು ನೀಡಿರುವ ತೀರ್ಪಿನಲ್ಲಿ ಮೇಲೆ ಪ್ರಸ್ತಾಪಿಸಿದ ಸರ್ಕಾರದ ಆದೇಶವನ್ನು ಸಿಂಧುಗೊಳಿಸಿರುತ್ತದೆ.

ಈ ಹಿನ್ನೆಲೆಯಲ್ಲಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಕಾಲೇಜುಗಳಲ್ಲಿ ಆಯಾ ಕಾಲೇಜು ಅಭಿವೃದ್ಧಿ ಸಮಿತಿ (CDC) ಅಥವಾ ಆಡಳಿತ ಮಂಡಳಿಯ ಮೇಲ್ವಿಚಾರಣಾ ಸಮಿತಿಯು ನಿರ್ಧರಿಸುವಂತಹ ಸಮವಸ್ತ್ರಗಳನ್ನು ಧರಿಸತಕ್ಕದ್ದು. ಆಡಳಿತ ಮಂಡಳಿಗಳು ಸಮವಸ್ತ್ರವನ್ನು ನಿಗಧಿಪಡಿಸದೇ ಇದ್ದಲ್ಲಿ ಸಮಾನತೆ ಮತ್ತು ಐಕ್ಯತೆಯನ್ನು ಕಾಪಾಡಿಕೊಂಡು ಹಾಗೂ ಸಾರ್ವಜನಿಕ ಸುವ್ಯವಸ್ಥೆಗೆ ಭಂಗ ಬರದಂತೆ ಇರುವ ಉಡುಪುಗಳನ್ನು ಧರಿಸಿ ದ್ವಿತೀಯ ಪಿ.ಯು.ಸಿ ಮುಖ್ಯ ಪರೀಕ್ಷೆಗೆ ಪ್ರವೇಶ ಪತ್ರದೊಂದಿಗೆ(Hall Ticket) ಪರೀಕ್ಷಾ ಕೇಂದ್ರಗಳಿಗೆ ಹಾಜರಾಗತಕ್ಕದ್ದು ಎಂದು ಈ ಮೂಲಕ ಸೂಚಿಸಿದೆ.

Padmini S N 9/4/22.

( ಪದ್ಮಿನಿ. ಎಸ್, ಎನ್ )
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಪದವಿ ಪೂರ್ವ)

ಇವರಿಗೆ,

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
2. ಕರ್ನಾಟಕ ರಾಜ್ಯ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ,. ಬೆಂಗಳೂರು.
3. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ದಂಡಾಧಿಕಾರಿಗಳು.
5. ರಾಜ್ಯದ ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
6. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
7. ರಾಜ್ಯದ ಎಲ್ಲಾ ಉಪ ನಿರ್ದೇಶಕಲು, ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು :-

1. ಮಾನ್ಯ ಮುಖ್ಯಮಂತ್ರಿರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಗೃಹ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಆಪ್ತ ಕಾರ್ಯದರ್ಶಿ. ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ. ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿಗಳು-( ಸೇ-1)2 ಆಪ್ತ ಸಹಾಯಕರು.
6. ಹೆಚ್ಚುವರಿ ಪ್ರತಿಗಳು.